# ಕರ್ನಾಟಕ ಸರ್ಕಾರ
# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,

**ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003**

**ಸಂಖ್ಯೆ: ಕ್ಯೂ1/ಡಿ.ಇಡಿ/ಡಿ.ಇಎಲ್.ಇಡಿ/ಮೇ-2019/ಫ.ಪ್ರ/05/2019-20** **ದಿನಾಂಕ:29.07.2019**

**ಸುತ್ತೋಲೆ**

ವಿಷಯ: ಮೇ-2019ರ ಮಾಹೆಯಲ್ಲಿ ನಡೆದ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಮೇ-2019ರ ಮಾಹೆಯಲ್ಲಿ ನಡೆದ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಫಲಿತಾಂಶವನ್ನು ಮಂಡಳಿಯ ವೆಬ್ ಸೈಟ್‌ನಲ್ಲಿ (www.kseeb.kar.nic.in) ನಲ್ಲಿ ದಿನಾಂಕ:31.07.2019ರಂದು ಬೆಳಿಗ್ಗೆ 11.00 ಗಂಟೆಗೆ ಪ್ರಕಟಿಸಲಾಗುವುದು. ಫಲಿತಾಂಶ ಪಟ್ಟಿಯ ಹಾರ್ಡ್ ಪ್ರತಿಯನ್ನು ಈ ಪತ್ರದೊಂದಿಗೆ ಕಳುಹಿಸಲಾಗಿದೆ. ಸಂಬಂಧಿಸಿದ ಡಿ.ಇಡಿ ಕಾಲೇಜುಗಳ ಸೂಚನಾ ಫಲಕದಲ್ಲಿ ಫಲಿತಾಂಶ ಪ್ರಕಟಿಸಲು ತಿಳಿಸಿದೆ. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. **ಸದರಿ ಫಲಿತಾಂಶವು ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.**

**ಮೇ 2019ರ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.**

| ವಿವರ | ದಿನಾಂಕ |
|---|---|
| ಮೇ 2019ರ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 01.08.2019 |
| ಮೇ 2019ರ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 07.08.2019 |
| ಮೇ 2019ರ ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 26.08.2019 |

**ಮರುಎಣಿಕೆ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಸದರಿ ಛಾಯಾಪ್ರತಿಯೊಂದಿಗೆ ಮಂಡಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಕಾಲೇಜಿಗೆ ಹಾಗೂ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು.**

ಉತ್ತೀರ್ಣ ಅಥವಾ ಅನುತ್ತೀರ್ಣ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಜರಾಕ್ಸ್ ಪ್ರತಿ ಬಯಸಿದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ನಿಗಧಿಪಡಿಸಿದ ಶುಲ್ಕವನ್ನು NEFT CHALLAN ಮೂಲಕ ಪಾವತಿಸಿ ಮೇಲ್ಕಂಡ ಅಂತಿಮ ದಿನಾಂಕದೊಳಗೆ, ಮಂಡಳಿಗೆ ಸಲ್ಲಿಸುವುದು. ನಿಗಧಿತ ಅವಧಿ ಮೀರಿ ಬಂದ ಅರ್ಜಿಗಳನ್ನು ಮಂಡಳಿ ಪರಿಗಣಿಸುವುದಿಲ್ಲ. ಜೊತೆಗೆ ಮಂಡಳಿಗೆ ಪಾವತಿಸಲಾದ ಮೊಬಲಗನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಪ್ರತ್ಯೇಕ ನಮೂನೆಗಳಿವೆ. ಆಯಾ ನಮೂನೆಗಳನ್ನು ಆಯಾ ಉದ್ದೇಶಕ್ಕೆ ಮಾತ್ರ ಬಳಸುವುದು.

| **ಶುಲ್ಕದ ವಿವರ** | |
|---|---|
| **ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ** | **ರೂ.300/– (ಮೂರು ನೂರು ರೂಪಾಯಿಗಳು)** |
| **ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ** | **ರೂ.700/– (ಏಳು ನೂರು ರೂಪಾಯಿಗಳು)** |

ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ 300/–ರಂತೆ ಜೆರಾಕ್ಸ್ ಪ್ರತಿ ಪಡೆಯಲು ಬಯಸುವ ಎಲ್ಲಾ ವಿಷಯಗಳಿಗೆ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ ರೂ.700/–ರಂತೆ ಮರುಮೌಲ್ಯಮಾಪನ ಬಯಸುವ ಎಲ್ಲಾ ವಿಷಯಗಳಿಗೂ ಶುಲ್ಕ ಪಾವತಿಸಬೇಕಾಗಿರುತ್ತದೆ. **ಮಂಡಳಿಯಿಂದ ಉತ್ತರ ಪತ್ರಿಕೆಯ ಛಾಯಾಪ್ರತಿ ಪಡೆಯದೇ ನೇರವಾಗಿ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.**

ಛಾಯಾಪ್ರತಿ ಮತ್ತು ಮರುಮೌಲ್ಯಮಾಪನದ ಅರ್ಜಿಗಳನ್ನು ಹಿರಿಯ ಸಹಾಯಕ ನಿರ್ದೇಶಕರು, ಕ್ಯೂ ಶಾಖೆ, 4ನೇ ಮಹಡಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ವಿಳಾಸಕ್ಕೆ ಸಲ್ಲಿಸಲು ತಿಳಿಸಿದೆ.

**ಫಲಿತಾಂಶ ಪ್ರಕಟಣೆಯಾದ ನಂತರ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಆಯಾ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಕಾಲೇಜಿನ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ.**

- ಮೇ–2019ರಲ್ಲಿ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.
- ನ್ಯಾಯಾಲಯದ ಪ್ರಕರಣಗಳಿಗೆ ಸಂಬಂಧಿಸಿದ ಕಾಲೇಜಿನ ವಿದ್ಯಾರ್ಥಿಗಳ ಫಲಿತಾಂಶಕ್ಕೆ "W" ಎಂದು, ನಕಲು ವ್ಯವಹಾರದಲ್ಲಿ ತೊಡಗಿದ ವಿದ್ಯಾರ್ಥಿಗಳ ಫಲಿತಾಂಶಕ್ಕೆ "M" ಎಂದು ದಾಖಲಿಸಿ ಫಲಿತಾಂಶ ಪ್ರಕಟಿಸಲಾಗಿದೆ.
- ವಿದ್ಯಾರ್ಥಿಯು ಆಯಾ ಪಠ್ಯವಸ್ತುವಿನಂತೆ ಪರೀಕ್ಷೆ ಬರೆಯದೇ, ಬೇರೆ ಪಠ್ಯವಸ್ತುವಿನಂತೆ ಬರೆದಿರುವ ವಿಷಯದ ಪರೀಕ್ಷೆಯ ಫಲಿತಾಂಶವನ್ನು ಮಂಡಳಿ ಪರಿಗಣಿಸಿಲ್ಲ. ಅಂತಹ ವಿಷಯದ ಫಲಿತಾಂಶವನ್ನು "AB" ಎಂದು ಪ್ರಕಟಿಸಲಾಗಿದೆ. ವಿದ್ಯಾರ್ಥಿಯು ಆಯಾ ಪಠ್ಯವಸ್ತುವಿನಂತೆ ಮುಂಬರುವ ಪರೀಕ್ಷೆಯನ್ನು ತೆಗೆದುಕೊಳ್ಳಬಹುದಾಗಿದೆ.
- ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳು ಮಾತ್ರ ಕನ್ನಡ ಮಾಧ್ಯಮದಲ್ಲಿ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿದೆ. ಉಳಿದಂತೆ ಪ್ರವೇಶ ಪತ್ರದಲ್ಲಿರುವಂತೆ, ವಿದ್ಯಾರ್ಥಿಗಳು ಆಯಾ ಮಾಧ್ಯಮದಲ್ಲಿಯೇ ಪರೀಕ್ಷೆ ಬರೆಯಬೇಕು. ಬೇರೆ ಮಾಧ್ಯಮದಲ್ಲಿ ಪರೀಕ್ಷೆ ಬರೆದಿದ್ದಲ್ಲಿ ಅಂತಹ ವಿದ್ಯಾರ್ಥಿಗಳ ಫಲಿತಾಂಶವನ್ನು "00" ಎಂದು ಪರಿಗಣಿಸಲಾಗಿದೆ.

➢ ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.

➢ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದಾಖಲೆಗಳೊಂದಿಗೆ ಫಲಿತಾಂಶ ಪ್ರಕಟವಾದ ಹದಿನೈದು ದಿನಗಳೊಳಗಾಗಿ ಮಂಡಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು.

➢ ವಿದ್ಯಾರ್ಥಿಯು ದ್ವಿತೀಯ ಡಿ.ಇಎಲ್.ಇಡಿ/ಡಿ.ಇಡಿಯಲ್ಲಿ ಉತ್ತೀರ್ಣರಾಗಿದ್ದು, ಪ್ರಥಮ ಡಿ.ಇಎಲ್.ಇಡಿ/ ಡಿ.ಇಡಿಯಲ್ಲಿ ಅನುತ್ತೀರ್ಣರಾಗಿದ್ದಲ್ಲಿ ಅಂತಹ ಫಲಿತಾಂಶವನ್ನು FNC (First Year Not Cleared) ಎಂದು ಪ್ರಕಟಿಸಲಾಗಿದೆ. ಪ್ರಥಮ ಡಿ.ಇಎಲ್.ಇಡಿ/ಡಿ.ಇಡಿಯಲ್ಲಿ ಉತ್ತೀರ್ಣರಾದ ನಂತರ ಸದರಿ ಫಲಿತಾಂಶಪಟ್ಟಿ ಅಥವಾ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ದೃಢೀಕರಿಸಿ ಫಲಿತಾಂಶ ಪ್ರಕಟವಾದ 30 ದಿನಗಳೊಳಗೆ ಪ್ರಸ್ತಾವನೆಯನ್ನು ಮಂಡಳಿಗೆ ಸಲ್ಲಿಸಿದಲ್ಲಿ ದ್ವಿತೀಯ ಡಿ.ಇಡಿ ಪರಿಷ್ಕೃತ ಫಲಿತಾಂಶ ಪಟ್ಟಿ ಮತ್ತು ಅಂಕಪಟ್ಟಿಯನ್ನು ಕಳುಹಿಸಲಾಗುವುದು. 30 ದಿನಗಳ ನಂತರ ಸಲ್ಲಿಸುವ ಪ್ರತಿಯೊಂದು ಪ್ರಕರಣಕ್ಕೆ ರೂ.1000/- ದಂಡ ಶುಲ್ಕವನ್ನು ಸಂಸ್ಥೆಯ ಪ್ರಾಂಶುಪಾಲರು ಮಂಡಳಿಗೆ ಪಾವತಿಸಬೇಕಾಗಿರುತ್ತದೆ. ಈ ಮೊತ್ತವನ್ನು ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳಿಂದ ವಸೂಲಿ ಮಾಡಬಾರದು.

➢ ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಜೆರಾಕ್ಸ್ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಆಯಾ ಕಾಲೇಜಿನ ಆವರಣದ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

(ವಿ.ಸುಮಂಗಲ)
ನಿರ್ದೇಶಕರು
(ಇತರೆ ಪರೀಕ್ಷೆಗಳು)

**ಪ್ರತಿಯನ್ನು:**

1. ಫಲಿತಾಂಶಪಟ್ಟಿಯನ್ನು ರಾಜ್ಯದ ಎಲ್ಲಾ ಜಿಲ್ಲೆಯ ಡಯಟ್ ಪ್ರಾಂಶುಪಾಲರಿಗೆ ಕಳುಹಿಸುತ್ತಾ, ಆಯಾ ಜಿಲ್ಲಾ ವ್ಯಾಪ್ತಿಗೆ ಬರುವ ಡಿ.ಇಡಿ ಕಾಲೇಜುಗಳ ಫಲಿತಾಂಶ ಪಟ್ಟಿ ವಿತರಿಸಿ, ಸ್ವೀಕೃತಿ ಪಡೆಯಲು ಮತ್ತು ಸಕಾಲದಲ್ಲಿ ಫಲಿತಾಂಶ ಪ್ರಕಟಣೆಯಾಗುವಂತೆ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಡಿ.ಇಡಿ ಕಾಲೇಜಿನ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಿದೆ.
3. ಕಛೇರಿ ಪ್ರತಿ.